ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

ಸಿ.ಸಿ. 639/2019

ಸಿ.ಡಬ್ಲ್ಯೂ -6, ಪಿ.ಡಬ್ಲ್ಯೂ -4

ದಿಃ **19.03.2025** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿಯ ಹೆಸರು | ಬಸಪ್ಪ |
| ತಂದೆ/ಗಂಡನ ಹೆಸರು | ರಾಮಯ್ಯ |
| ವಯಸ್ಸು | 81 ವರ್ಷ |
| ಕೆಲಸ | ವ್ಯವಸಾಯ |
| ವಾಸಸ್ಥಳ | ಹಂದನಹಳ್ಳಿ |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:**

ಪ್ರಕರಣದ ಬಗ್ಗೆ ಮಾಹಿತಿ ಇಲ್ಲ. ಸಾಕ್ಷಿಗೆ ಅಮಾನತು ಮಹಜರ್ ನ್ನು ತೋರಿಸಿದ್ದು, ಸಾಕ್ಷಿ ಅದರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-3 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು 3(ಎ) ಎಂದು ಗುರುತಿಸಲಾಯಿತು. ನಿಪಿ-3 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಅಮಾನತು ಮಹಜರ್ ಕ್ರಮ ಕೈಗೊಂಡಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತುಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ ವಕೀಲರಿಂದಃ**

ದಿಃ 10.04.2015 ರಂದು ಪೊಲೀಸರು ಘಟನಾ ಸ್ಥಳಕ್ಕೆ ಬಂದಿದ್ದು, ಅಲ್ಲಿ ಚಾಸಾ- 1 ರವರು ಹಾಜರಿದ್ದು, ಘಟನಾ ಸ್ಥಳವನ್ನು ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-5 ರವರ ಸಮಕ್ಷಮ ಬೆಳಿಗ್ಗೆ 3.15 ರಿಂದ 3.45 ರವರೆಗೆ ನಿಪಿ-3 ರಂತೆ ಅಮಾನತು ಮಹಜರ್ ಕ್ರಮ ಕೈಗೊಂಡು, ಸ್ಥಳದಿಂದ ರಾಡನ್ನು ಅಮಾನತ್ತುಪಡಿಸಿಕೊಂಡು, ನಿಪಿ-3 ಕ್ಕೆ ಅಲ್ಲಿಯೇ ನನ್ನ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ.

ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ನಿಜವಲ್ಲ.

**ಪಾಟೀಸವಾಲು ಆರೋಪಿ ಪರ ಃ**

ಪಾಟೀಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು.